## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ. ಹರೀಶ್ ಕುಮಾರ್, ಇವರ ನಿಯಮ 72 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಹೇಳಿಕೆ

******

**ಸೂಚನೆ:-**

"ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ಆಯ್ಕೆಯಾಗಿರುವ ವಿಧಾನ ಪರಿಷತ್ತಿನ ಸದಸ್ಯರುಗಳನ್ನು ಮಂಡಳಿಯ ಸದಸ್ಯರನ್ನಾಗಿ ನಾಮನಿರ್ದೇಶನ ಮಾಡುವ ಕುರಿತು ಸರ್ಕಾರದ ಭರವಸೆ ಜಾರಿಯಾಗದಿರುವುದು ಹಾಗೂ ಈ ಸಂಬಂಧ ವಿಧಾನಮಂಡಲದಲ್ಲಿ ವಿಧೇಯಕವನ್ನು ಮಂಡಿಸದಿರುವ ಕುರಿತು".

******

**ಸರ್ಕಾರದ ಹೇಳಿಕೆ:-**

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯನ್ನು ಮಂಡಳಿಯ ಅಧಿನಿಯಮ 1991 (ಕರ್ನಾಟಕ ಅಧಿನಿಯಮ 1991ರ ಸಂಖ್ಯೆ 36) ಹಾಗೂ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ (ತಿದ್ದುಪಡಿ ಅಧಿನಿಯಮ ಸಂಖ್ಯೆ: 1993ರ 18 ಮತ್ತು 1994ರ 34) ಕಾಯ್ದೆ ರೂಪಿಸಲಾಗಿದ್ದು, ಅಧ್ಯಾಯ-II ಪ್ರಕರಣ 3(3) ರಲ್ಲಿ ಈ ಕೆಳಕಂಡಂತೆ ಸದಸ್ಯರಾಗಲು ಮಾನದಂಡಗಳನ್ನು ನಿಗಧಿಪಡಿಸಲಾಗಿದೆ.

- ಮಲೆನಾಡು ಪ್ರದೇಶವನ್ನು ಭಾಗಶಃ ಅಥವಾ, ಪೂರ್ಣವಾಗಿ ಪ್ರತಿನಿಧಿಸುವ ಮಂಡಳಿಯ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು.
- ಮಲೆನಾಡು ಪ್ರದೇಶದ ಪರಿಧಿಯಲ್ಲಿ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಜಿಲ್ಲಾ ಪರಿಷತ್ತುಗಳ ಅಧ್ಯಕ್ಷರು:
- ರಾಜ್ಯ ಸರ್ಕಾರದಿಂದ ನಾಮ ನಿರ್ದೇಶಿತರಾದ ಹತ್ತು ಮಂದಿಯನ್ನು ಮೀರದ ಸದಸ್ಯರು, ಅವರ ಪೈಕಿ ಇಬ್ಬರು ಅನುಸೂಚಿತ ಜಾತಿಗಳು ಮತ್ತು ಒಬ್ಬರು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ವ್ಯಕ್ತಿಗಳು ಸದಸ್ಯರಾಗಿರುತ್ತಾರೆ.
- ಮಂಡಳಿಯ ಕಾರ್ಯದರ್ಶಿ ಮತ್ತು.
- ಮಲೆನಾಡು ಪ್ರದೇಶದಲ್ಲಿರುವ ಪ್ರತಿಯೊಂದು ಜಿಲ್ಲೆಯ ಡೆಪ್ಯುಟಿ ಕಮಿಷನರವರು ಮಂಡಳಿಯ ಸದಸ್ಯರಾಗಿರುತ್ತಾರೆ.

ಕರ್ನಾಟಕ ವಿಧಾನಸಭೆಯಿಂದ ಆಯ್ಕೆಯಾಗಿರುವ ನಾಮ ನಿರ್ದೇಶಿತ ವಿಧಾನಸಭೆ ಸದಸ್ಯರನ್ನು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಸದಸ್ಯರೆಂದು ಪರಿಗಣಿಸಲು ಮಂಡಳಿಯ ಅಧಿನಿಯಮದಲ್ಲಿ ಪ್ರಸ್ತುತ ಅವಕಾಶವಿರುವುದಿಲ್ಲ, ಆದ್ದರಿಂದ ವಿಧಾನಸಭೆಯಿಂದ ಆಯ್ಕೆಯಾಗಿರುವ ವಿಧಾನ ಪರಿಷತ್ ಸದಸ್ಯರುಗಳನ್ನು ಮಂಡಳಿಯ ಸದಸ್ಯರನ್ನಾಗಿ ಪರಿಗಣಿಸಲು ಅಧಿನಿಯಮಕ್ಕೆ ತಿದ್ದುಪಡಿ ತಂದು ಸದಸ್ಯರನ್ನಾಗಿ ಮಾಡಲು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯೊಂದಿಗೆ ಸಮಾಲೋಚಿಸಲಾಗಿದ್ದು, ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಅಧಿಕಾರಿ ವ್ಯಾಪ್ತಿಯೊಳಗೆ ಜಿಲ್ಲೆ/ತಾಲ್ಲೂಕನ್ನು ನೋಡಲ್ ಜಿಲ್ಲೆ ಎಂದು ಆಯ್ಕೆ ಮಾಡಿಕೊಂಡಿರುವ ವಿಧಾನ ಪರಿಷತ್ ಸದಸ್ಯರುಗಳನ್ನು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಸದಸ್ಯರನ್ನಾಗಿ

ಸೇರ್ಪಡೆಗೊಳಿಸುವ ಬಗ್ಗೆ ಕ್ರಮವಹಿಸಲಾಗಿದ್ದು, ಕಡತ ಚಾಲನೆಯಲ್ಲಿರುತ್ತದೆ. ಪ್ರಸ್ತುತ ಕಡತವು ಕಾನೂನು ಸಚಿವರ ಅನುಮೋದನೆಗಾಗಿ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಗೆ ಸಲ್ಲಿಸಲಾಗಿದೆ. ಅನುಮೋದನೆ ದೊರೆತ ನಂತರ ವಿಧಾನ ಸಭೆಯಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರನ್ನು ಮಂಡಳಿಯ ಸದಸ್ಯರನ್ನಾಗಿ ನೇಮಕ ಮಾಡುವ ಬಗ್ಗೆ ಮಂಡಳಿಯ ಅಧಿನಿಯಮಕ್ಕೆ ತಿದ್ದುಪಡಿ ತರಲು ವಿಧಾನಮಂಡಲದಲ್ಲಿ ವಿಧೇಯಕವನ್ನು ಮಂಡಿಸಲಾಗುವುದು.

**(ಸಂಖ್ಯೆ: ಪಿಡಿಎಸ್ 18 ಎಂಡಿಬಿ 2022)**

(ಮುನಿರತ್ನ)

**ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು.**